(ಈ ಹಂತದಲ್ಲಿ ಆಡಳಿತ ಪಕ್ಷದ ಕೆಲವು ಸದಸ್ಯರು ಅವರವರ ಸ್ಥಾನದಲ್ಲಿಯೇ ಎದ್ದು ನಿಂತು ಬಿಜೆಪಿಯವರ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು.)

ಅಧ್ಯಕ್ಷರು:– ನೀವು ಕುಳಿತುಕೊಳ್ಳಿ. ಈಗ ಪಿ. ರಾಜೀವ್ ರವರ ಪ್ರಶ್ನೆ.

ಪೊಲೀಸ್ ಪೇದೆ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಬಯಲು

07(119); ಶ್ರೀ ರಾಜೀವ್ ಪಿ (ಕುಡಚಿ)

ಅ) ಪೊಲೀಸ್ ಪೇದೆ ನೇಮಕಾತಿ ಪರೀಕ್ಷೆಯಲ್ಲಿ ದಿನಾಂಕ 16.11.2014ರಂದು ಪಾಲ್ಗೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು?

ಆ) ಖಾಲಿ ಇರುವ ಎಷ್ಟು ಹುದ್ದೆಗಳಿಗಾಗಿ ಈ ಪರೀಕ್ಷೆಯನ್ನು ನಡೆಸಲಾಯಿತು?

ಇ) ಈ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಬಯಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಈ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ?

ಉ) ಪ್ರಶ್ನೆ ಪತ್ರಿಕೆ ಬಯಲು ಮಾಡಿದ ವ್ಯಕ್ತಿಗಳನ್ನು ಸರ್ಕಾರ ಗುರುತಿಸಿದೆಯೇ; ಹಾಗಿದ್ದಲ್ಲಿ, ಯಾವ ಕ್ರಮವನ್ನು ಜರುಗಿಸಲಾಗಿದೆ?

ಊ) ಪ್ರಶ್ನೆ ಪತ್ರಿಕೆ ಬಯಲಾಗುವುದರಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮಾನಸಿಕ ಸ್ಥೈರ್ಯ ಕುಂದುವುದಿಲ್ಲವೆ;

ಋ) ಪರೀಕ್ಷೆಯನ್ನು ಪುನಃ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ದಿನಾಂಕ 16.11.2014ರಮದು ನಡೆಸಲಾದ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಯ ಲಿಖಿತ ಪರೀಕ್ಷೆಗೆ ಒಟ್ಟು 83,166 ಅಭ್ಯರ್ಥಿಗಳು ಹಾಜರಾಗಿರುತ್ತಾರೆ.

ಆ) 6,609 ಖಾಲಿ ಪೊಲೀಸ್ ಪೇದೆ ಹುದ್ದೆಗಳಿಗೆ ಲಿಖಿತ ಪರೀಕ್ಷೆ ನಡೆಸಲಾಯಿತು.

ಇ) ಬಂದಿದೆ

ಈ) ಹೌದು

ಉ) ಪ್ರಶ್ನೆ ಪತ್ರಿಕೆ ಬಯಲಾದ ಪ್ರಕರಣದಲ್ಲಿ ಕಲಬುರ್ಗಿ ನಗರದ ವಿಶ್ವ–ವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 290/2014 ಕಲಂ 420 & 120ಬಿ ಐಪಿಸಿ ರಡಿಯಲ್ಲಿ ದಾಖಲಿಸಿ, ತನಿಖೆಯನ್ನು ಮುಂದುವರೆಸಿದ್ದು, ಇಲ್ಲಿಯವರೆಗೆ 14 ಜನ ಆರೋಪಿಗಳನ್ನು ದಸ್ತಗಿರಿ ಮಾಡಿದ್ದು, ಅವರಿಂದ ₹ 77,03,500/– ಗಳನ್ನು ಜಪ್ತಿ ಮಾಡಲಾಗಿದೆ.

ತನಿಖೆಯ ಸಂಪೂರ್ಣ ವರದಿ ಬಂದ ನಂತರ ತಪ್ಪಿತಸ್ಥರ ಮೇಲೆ ಸೂಕ್ತ ಕಾನೂನು ಕ್ರಮವನ್ನು ಜರುಗಿಸಲಾಗುವುದು.

ಊ) ಪ್ರಶ್ನೆ ಪತ್ರಿಕೆ ಬಯಲಾಗುವುದರಿಂದ ಪ್ರತಿಭಾವಂತ ಅಭ್ಯರ್ಥಿಗಳಿಗೆ ಮಾನಸಿಕ ಸ್ಥೈರ್ಯ ಕುಂದುವುದು ನಿಜ. ಆದ್ದರಿಂದ ಲಿಖಿತ ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಅಳವಡಿಸಲಾಗುತ್ತದೆ.

ಋ) ಹೌದು, ಈಗಾಗಲೇ ನಡೆಸಿರುವ ಪರೀಕ್ಷೆಯನ್ನು ರದ್ದುಪಡಿಸಿ ಪುನಃ ಪರೀಕ್ಷೆ ನಡೆಸಲು ನಿರ್ಧರಿಸಲಾಗಿರುತ್ತದೆ.

ಶ್ರೀ ಪಿ. ರಾಜೀವ್:– ಮಾನ್ಯ ಅಧ್ಯಕ್ಷರೆ, ಇನ್ನು ಮುಂದೆ ಈ ರೀತಿ ಆಗದಂತೆ ಕ್ರಮ ವಹಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಶ್ರೀ ಕೆ.ಜೆ. ಜಾರ್ಜ್:– ಮಾನ್ಯ ಅಧ್ಯಕ್ಷರೆ, ಕ್ರಮ ತೆಗೆದುಕೊಳ್ಳುತ್ತೇವೆ.

(ಗೊಂದಲ)

ಶ್ರೀ ಆರ್. ಅಶೋಕ್:– ಮಾನ್ಯ ಅಧ್ಯಕ್ಷರೆ, ಕಳೆದ ಬಾರಿ ಬೆಳಗಾವಿಯಲ್ಲಿ ಅಧಿವೇಶನ ಆದಾಗ ರೈತ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಬಾರಿ ಇಡೀ ರಾಜ್ಯದಲ್ಲಿ ರೈತರು ಹೋರಾಟ ಮಾಡುತ್ತಿದ್ದಾರೆ. ದಯವಿಟ್ಟು ನಮಗೆ ರೈತರ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ಅವಕಾಶ ಮಾಡಿಕೊಡಿ.

(ಈ ಹಂತದಲ್ಲಿ ಜೆ.ಡಿ.ಎಸ್ ಪಕ್ಷದ ಸದಸ್ಯರು ಬಾವಿಗಿಳಿದು ಪ್ರತಿಭಟನೆ ನಡೆಸಿದರು.)

ಅಧ್ಯಕ್ಷರು:– ಪ್ರಶ್ನೋತ್ತರ ವೇಳೆ ಮುಗಿಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಆ. ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, ದಿನಾಂಕ: 09.12.2014 ರ ಒಂದನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 180 ಪ್ರಶ್ನೆಗಳ ಪೈಕಿ 112 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

(ಅನುಬಂಧ–1) (ಭಾಗ–II)

ಅಧ್ಯಕ್ಷರು:– ಮಂಡಿಸಲಾಯಿತು.

ಅಧ್ಯಕ್ಷರು:– ಈಗ ಕಾರ್ಯದರ್ಶಿಯವರ ವರದಿ